ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020-21 ದಿನಾಂಕ : 07-11-2020

# ಮಾಧ್ಯಮ ಆಮಂತ್ರಣ

1) ಪತ್ರಿಕಾಗೋಷ್ಠಿ :

ಕೃಷಿ ಮೇಳ –2020

ಡಾ : ಎಸ್. ರಾಜೇಂದ್ರ ಪ್ರಸಾದ್, ಉಪ ಕುಲಪತಿಗಳು, ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ

ದಿನಾಂಕ : 09-11-2020, ಸೋಮವಾರ, ಸಮಯ : ಬೆಳಿಗ್ಗೆ 11-30 ಗಂಟೆಗೆ

ಸ್ಥಳ : ಆಡಳಿತ ಮಂಡಳಿ ಸಭಾ ಕೊಠಡಿ (ನಾಯಕ್ ಭವನ, ಕುಲಪತಿಗಳ ಕಚೇರಿಯ ಮೇಲ್ಭಾಗ ಆರನೇ ಮಹಡಿ, ಕೃಷಿ ವಿಶ್ವವಿದ್ಯಾಲಯ, ಗಾಂಧಿ ಕೃಷಿ ವಿಜ್ಞಾನ ಕೇಂದ್ರ (ಜಿ.ಕೆ.ವಿ.ಕೆ)

ವಿ.ಸೂ : ದಿನಾಂಕ 09-11-2020 ಸೋಮವಾರ ರಂದು ಬೆಳಿಗ್ಗೆ 10-30 ಗಂಟೆಗೆ ಕಬ್ಬನ್ ಪಾರ್ಕ್ ನಲ್ಲಿರುವ ಪ್ರೆಸ್‌ಕ್ಲಬ್ ಆವರಣದಿಂದ ವಾಹನ ನಿಗದಿತ ಸ್ಥಳದತ್ತ ತೆರಳಲಿದೆ. ಹೆಚ್ಚಿನ ವಿವರಗಳಿಗಾಗಿ ಡಾ: ಶಿವರಾಮು, ಮೊ: 9972035456 ಸಂಪರ್ಕಿಸಬಹುದು.

# ಪತ್ರಿಕಾ ಪ್ರಕಟಣೆ

## ಕರ್ನಾಟಕದಲ್ಲಿ ಕನ್ನಡಕ್ಕೆ ಅಗ್ರಸ್ಥಾನ – ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ

**ಬೆಂಗಳೂರು, ನವಂಬರ್ 07 (ಕರ್ನಾಟಕ ವಾರ್ತೆ):**

ಕನ್ನಡ ನಾಡು, ನುಡಿ, ಸಾಹಿತ್ಯ, ಸಂಸ್ಕೃತಿ ಎನ್ನುವುದು ನಮ್ಮ ಅಸ್ಮಿತೆಯ ಭಾಗವಾಗಿದೆ. ಭಾಷೆ ಮತ್ತು ಜನ್ಮಭೂಮಿ ನಮಗೆ ಹೆತ್ತ ತಾಯಿಗೆ ಸಮಾನ. ಹೆತ್ತತಾಯಿಗೆ ಸಲ್ಲುವ ಗೌರವ ನಮ್ಮ ಭಾಷೆ

ಮತ್ತು ನಾವು ಹುಟ್ಟಿದ ನಾಡಿಗೆ ಸಲ್ಲಬೇಕು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಹೇಳಿದರು.

ಇಂದು ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ 2020ನೇ ಸಾಲಿನ 65 ಸಾಧಕರಿಗೆ 65ನೇ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪ್ರಧಾನ ಮಾಡಿ ಮಾತನಾಡಿದ ಅವರು ಕರ್ನಾಟಕದಲ್ಲಿ ಕನ್ನಡಕ್ಕೆ ಅಗ್ರಸ್ಥಾನ, ಕನ್ನಡವನ್ನು ಇಲ್ಲಿ ಬೆಳೆಸದಿದ್ದರೆ ಬೇರೆಲ್ಲೂ ಬೆಳೆಯದು. ಕನ್ನಡವನ್ನು ನಮ್ಮ ಮನೆಯ ಮತ್ತು ಮನದ ಭಾಷೆಯನ್ನಾಗಿ ಪರಿಗಣಿಸಿ ವ್ಯವಹಾರದಲ್ಲೂ ಸಹ ಕನ್ನಡವನ್ನು ಬಳಸಬೇಕು ಎಂದು ಕರೆ ನೀಡಿದರು.

"ಕನ್ನಡದ ಸಾಮರ್ಥ್ಯ, ಅದರ ತೀಕ್ಷ್ಣತೆ, ಅದರ ಸೂಕ್ಷ್ಮತೆ, ಅದರ ಶಕ್ತಿ, ಅದರ ಓಜಸ್ಸು, ಜಗತ್ತಿನ ಇನ್ನಾವ ಭಾಷೆಗೂ ಕೀಳಲ್ಲ" ಎಂದು ರಾಷ್ಟ್ರಕವಿ ಕುವೆಂಪು ಹೇಳಿದ್ದಾರೆ. ಕನ್ನಡ ಭಾಷೆಯ ಬೆಳವಣಿಗೆಗೆ ಅನೇಕ ಮಹನೀಯರು ಶ್ರಮಿಸಿದ್ದಾರೆ. ಕನ್ನಡ ನಮ್ಮ ಹೃದಯದ ಭಾಷೆ. ವ್ಯವಹಾರದ ಭಾಷೆಯೂ ಆಗಬೇಕು. ನಮ್ಮ ದೈನಂದಿನ ವ್ಯವಹಾರದಲ್ಲಿ ಹೆಚ್ಚು ಹೆಚ್ಚು ಕನ್ನಡವನ್ನೇ ಬಳಸುವಂತಾಗಬೇಕು. ಭಾಷೆಯನ್ನು ಬಳಸಿದಂತೆ ಅದು ಬೆಳೆಯುತ್ತಾ ಹೋಗುತ್ತದೆ. ಕನ್ನಡದ ಸೌಂದರ್ಯ, ಸತ್ವವನ್ನು ಕಾಪಾಡುವ ಹೊಣೆ ನಮ್ಮೆಲ್ಲರದ್ದೂ ಆಗಿದೆ ಎಂದರು.

ಮುಖ್ಯಮಂತಿಗಳು ಕನ್ನಡ ಭಾಷೆಯ ಅಭಿವೃದ್ಧಿಗೆ ರಾಜ್ಯ ಸರ್ಕಾರ ಸದಾ ಬದ್ಧವಾಗಿದೆ. ಕನ್ನಡ ಭಾಷೆ ಮತ್ತು ಸಾಹಿತ್ಯ ಹಾಗೂ ಕಲೆಗಳ ಬೆಳವಣಿಗೆಗೆ ಪೂರಕವಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ನವೆಂಬರ್ ನಿಂದ ಮುಂದಿನ ಅಕ್ಟೋಬರ್ 31 ರವರೆಗೆ **'ಕನ್ನಡ ಕಾಯಕ ವರ್ಷ'**ವನ್ನು ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಇಂದು ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾಗಿರುವ ಎಲ್ಲರೂ ನಾಡು-ನುಡಿಯ ಅಭಿವೃದ್ಧಿಗೆ ತಮ್ಮದೇ ರೀತಿಯಲ್ಲಿ ಕೊಡುಗೆ ನೀಡಿದ್ದಾರೆ. ಅತ್ಯಂತ ಪಾರದರ್ಶಕವಾಗಿ ನಾಡಿನ ಮೂಲೆಮೂಲೆಗಳಲ್ಲಿ ಎಲೆಮರೆಯ ಕಾಯಿಯಂತಿರುವ ಸಾಧಕರನ್ನು ಶೋಧಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಸಾಮಾನ್ಯರಲ್ಲಿ ಅಸಮಾನ್ಯರಾಗಿ ಕಾರ್ಯನಿರ್ವಹಿಸುತ್ತಿರುವ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಇವರೆಲ್ಲರೂ ತಮ್ಮದೇ ಛಾಪು ಮೂಡಿಸಿದ್ದಾರೆ. ಇವರ ಸಾಧನೆಗಳು ಇತರರಿಗೂ

ಮಾದರಿಯಾಗಲಿ, ನಾಡಿಗೆ ಇವರಿಂದ ಇನ್ನಷ್ಟು ಮಹತ್ವಪೂರ್ಣ ಕೊಡುಗೆ ದೊರೆಯುವಂತಾಗಲಿ ಎಂದು ಹಾರೈಸಿದರು.

ಪ್ರಶಸ್ತಿ ಸಮಾರಂಭದಲ್ಲಿ ಅತ್ಯಂತ ಸಂತೋಷದಿಂದ ಭಾಗವಹಿಸಿದ ಮುಖ್ಯಮಂತ್ರಿಗಳು ವಿವಿಧ ಕ್ಷೇತ್ರಗಳಲ್ಲಿ ಅದ್ವಿತೀಯ ಸಾಧನೆಗೈದ 65 ಮಂದಿ ಸಾಧಕರಿಗೆ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಿ ಗೌರವಿಸಿದರು. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಿಗೆ ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿದರು. ಇದೆ ಸಂದರ್ಭದಲ್ಲಿ ಭುವನೇಶ್ವರಿ ತಾಯಿಯ ಭಾವ ಚಿತ್ರಕ್ಕೆ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಪುಷ್ಪವನ್ನು ಸಮರ್ಪಿಸಿದರು.

ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವ ಸಿ.ಟಿ. ರವಿ ಅವರು ಪ್ರಾಸ್ತಾವಿಕವಾಗಿ ಮಾತಾನಾಡಿ ಕನ್ನಡ ಭಾಷೆ ಬೆಳೆಯಬೇಕು ಮತ್ತು ಉಳಿಯಬೇಕು, ಭಾಷೆ ಸಂಸ್ಕೃತಿಯ ಕೀಲಿಕೈ. ಕನ್ನಡ ನಾಡು ಶ್ರೀಗಂಧದ ಬೀಡು. ಕನ್ನಡ ನಾಡು ಜಾತಿ–ಮತ ಮೀರಿದ ಸಂಸ್ಕೃತಿಯಾಗಿದೆ ಎಂದರು.

ಮಗುವು ಹುಟ್ಟಿದಾಗ ಮುಗ್ದವಾಗಿರುತ್ತದೆ. ಮುಗ್ದತೆಯಿಂದ ವಿಶ್ವಮಾನವನಾಗುತ್ತಾನೆ. ಬೆಳೆಯುತ್ತಾ ಅಲ್ಪಮಾನವನಾಗುತ್ತಾನೆ. ಮತ್ತೆ ಅವನು ವಿಶ್ವಮಾನವನಾಗಲು ಸಂಸ್ಕೃತಿಯಧಾರಣೆ ಮಾಡಬೇಕಾಗುತ್ತದೆ. ನಾಡು ನುಡಿ ಅಭಿಮಾನದಿಂದ ಬೆಳೆಸಬೇಕು ಎಂದರು.

ಇದೇ ಸಮಯದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಜ್ಯದ ಕಲಾತಂಡಗಳಿಗಾಗಿ ಅಭಿವೃದ್ಧಿಪಡಿಸಲಾಗಿರುವ ನೂತನ ಕಲಾತಂಡ ಆ್ಯಪ್‌ನ್ನು ಸಚಿವ ಸಿ.ಟಿ. ರವಿ ಅವರು ಬಿಡುಗಡೆ ಮಾಡಿದರು. ಈ ಆ್ಯಪ್ ವಿಶೇಷವಾಗಿ ರಾಜ್ಯದಲ್ಲಿನ ಕಲಾತಂಡಗಳ ಪರಿಚಯ, ಅವರು ನೀಡುವ ಕಲಾಪ್ರದರ್ಶನಗಳ ಸ್ಥಳಗಳನ್ನು ಜಿಪಿಆರ್‌ಎಸ್ ಮೂಲಕ ಅಧಿಕಾರಿಗಳು ಪರಿಶೀಲಿಸಬಹುದಾಗಿದೆ. ಸರ್ಕಾರದ ಯೋಜನೆಗಳನ್ನು ಪ್ರಚುರ ಪಡಿಸಲು ಆಯ್ಕೆಯಾಗುವ ಕಲಾತಂಡಗಳಿಗೆ ಜೇಷ್ಠತೆ ಆಧಾರದ ಮೇಲೆ ಕಾರ್ಯಕ್ರಮಗಳನ್ನು ನೀಡಲು ಸಹಾಯವಾಗುತ್ತದೆ ಎಂದು ಸಚಿವರು ತಿಳಿಸಿದರು.

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ ಶಾಸಕ ಉದಯ್ ಬಿ ಗರುಡಾಚಾರ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನುವಹಿಸಿದ್ದರು. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವ ಲಕ್ಷಣ ಸಂಗಪ್ಪ ಸವದಿ, ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ

ಸಂಸದ ತೇಜಸ್ವಿ ಸೂರ್ಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಾರ್ಯದರ್ಶಿ ವಿ. ರಶ್ಮಿ ಮಹೇಶ್ ಹಾಗೂ ನಿರ್ದೇಶಕರಾದ ರಂಗಪ್ಪ ಅವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಪ್ರಶಸ್ತಿಗೆ ಭಾಜನರಾದ ಚಿತ್ರದುರ್ಗದ ರೈತ ಮಹಿಳೆ ಶ್ರೀಮತಿ ಎಸ್.ವಿ. ಸುಮಂಗಲಮ್ಮ ವೀರಭದ್ರಪ್ಪ ಹಾಗೂ ಡಾ.ಕೆ.ಎಸ್. ರಾಜಣ್ಣ ಅವರು ಪ್ರಶಸ್ತಿ ಸ್ವೀಕರಿಸಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡು ಹರ್ಷ ವ್ಯಕ್ತಪಡಿಸಿದರು.

**ಪ್ರಶಸ್ತಿ ವಿಜೇತರ ಪಟ್ಟಿಯನ್ನು ಲಗತ್ತಿಸಲಾಗಿದೆ)**

## ಭಾರತದ ಮೊದಲ ಶುದ್ಧ ವಾಯು ರಸ್ತೆ

## ಬೆಂಗಳೂರಿನ ಚರ್ಚ್ ಸ್ಟ್ರೀಟ್

**ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)**

ಭಾರತದ ಮೊದಲ ಶುದ್ಧ ವಾಯು ರಸ್ತೆಯನ್ನಾಗಿ ನಗರದ ಬ್ರಿಗೇಡ್ ರಸ್ತೆಗೆ ಅಂಟಿಕೊಂಡಿರುವ ಚರ್ಚ್ ಸ್ಟ್ರೀಟ್‌ನಲ್ಲಿ ಇನ್ನೂ ಮುಂದೆ ವಾಯುಗುಣಮಟ್ಟ ಸುಧಾರಣೆ ಹಾಗೂ ವಿದ್ಯುತ್ ಚಾಲಿತ ವಾಹನಗಳನ್ನು ಬಳಸುವ ಮೂಲಕ ಶುದ್ಧ ವಾಯು ಬೀದಿಯನ್ನಾಗಿಸಲು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಇಂದು ಚಾಲನೆ ನೀಡಿದರು.

ನಗರ ಭೂ ಸಾರಿಗೆ ನಿರ್ದೇಶನಾಲಯ, ಭಾರತೀಯ ವಿಜ್ಞಾನ ಸಂಸ್ಥೆ, ಯುಕೆ ಕ್ಯಾಟಪಲ್ಸ್ ಮತ್ತು ಚರ್ಚ್‌ಸ್ಟ್ರೀಟ್ ರಸ್ತೆಯ ಭೂ ಮಾಲೀಕರ ಸಂಘದ ಸಹಯೋಗದಲ್ಲಿ ಇಂದು ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಬೆಂಗಳೂರಿನಲ್ಲಿ ಸುಮಾರು 85 ಲಕ್ಷ ವಾಹನಗಳು ದಿನನಿತ್ಯ ಸಂಚರಿಸುತ್ತಿವೆ. ಇದರಿಂದ ದಿನೇ ದಿನೇ ವಾಯು ಮಾಲಿನ್ಯ ಹೆಚ್ಚಾಗುತ್ತಿದೆ. ಜನರು ಸಾರ್ವಜನಿಕ ಸಾರಿಗೆ, ಸೈಕಲಿಂಗ್ ಹಾಗೂ ನಡಿಗೆಗೆ ಹೆಚ್ಚು ಪ್ರೋತ್ಸಾಹ ನೀಡಿ ನಗರವನ್ನು ಮಾಲಿನ್ಯದಿಂದ ತಡೆಯಬೇಕು. ಚರ್ಚ್ ರಸ್ತೆಯಲ್ಲಿ ಪ್ರಾರಂಭವಾಗುತ್ತಿರುವ ಈ ವಿನೂತನ ಕಾರ್ಯಕ್ರಮ ಮುಂಬರುವ ದಿನಗಳಲ್ಲಿ ಇತರೆ ರಸ್ತೆಗಳಿಗೆ ಮಾದರಿಯಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಮಾತನಾಡಿದ ನಗರಾಭಿವೃದ್ಧಿ ಸಚಿವ ಭೈರತಿ ಬಸವರಾಜು, ಚರ್ಚ್‌ಸ್ಟ್ರೀಟ್‌ನಲ್ಲಿ 7 ನೇ ನವೆಂಬರ್‌ನಿಂದ 28 ನೇ ಫೆಬ್ರವರಿವರೆಗೆ ಸ್ವಚ್ಚ ವಾಯು ಬೀದಿ ಚಟುವಟಿಕೆಯನ್ನು ಹಮ್ಮಿಕೊಳ್ಳಲಾಗಿದೆ.

ಈ ಅವಧಿಯಲ್ಲಿ ಮೋಟಾರು ವಾಹನ ಸಂಚಾರವನ್ನು ಸ್ಥಗಿತಗೊಳಿಸಲಾಗುವುದು. ತುರ್ತು ವಾಹನ ಹಾಗೂ ನಿವಾಸಿಗಳ ವಾಹನಗಳಿಗೆ ಮಾತ್ರ ಅವಕಾಶ ನೀಡಿ ಹಸಿರು ಸಾರಿಗೆ ಕ್ರಮಗಳನ್ನು ಅಳವಡಿಸಲಾಗುವುದು. ಇದರ ಆಚರಣೆ ಮೂಲಕ ಭಾಗೀದಾರ ಸಂಸ್ಥೆಗಳು ಸ್ವಚ್ಛ ಚಲನಶೀಲನೆಗೆ ಆದ್ಯತೆ ನೀಡಿದಂತಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಶಾಂತಿನಗರ ಶಾಸಕರಾದ ಹ್ಯಾರೀಸ್ ಅವರು ಮಾಲಿನ್ಯದಿಂದ ನಮ್ಮ ನಗರ ರಾಜ್ಯ ಹಾಗೂ ದೇಶವನ್ನು ರಕ್ಷಿಸುವ ಹೊಣೆ ನಮ್ಮೆಲ್ಲರ ಮೇಲಿದೆ. ಸರ್ಕಾರಿ ಹಾಗೂ ಖಾಸಗಿ ಭಾಗಿತ್ವದ ಈ ಸ್ವಚ್ಛ ವಾಯು ಬೀದಿ ಪ್ರದರ್ಶನ ಯಶಸ್ವಿಯಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಸ್ವಯಂ ಚಾಲಿತ ವಿದ್ಯುತ್ ವಾಹನಗಳನ್ನು ಪ್ರದರ್ಶನಕ್ಕೆ ಇಡಲಾಗಿತ್ತು. ಕಾರ್ಯಕ್ರಮದಲ್ಲಿ ನಗರ ಭೂ ಸಾರಿಗೆ ನಿರ್ದೇಶನಾಲಯದ ಆಯುಕ್ತರಾದ ವಿ. ಮಂಜುಳ, ಬಿ.ಬಿ.ಎಂ.ಪಿ. ಆಯುಕ್ತ ಮಂಜುನಾಥ ಪ್ರಸಾದ್, ಅಧ್ಯಕ್ಷರಾದ ಗೌರವ್‌ಗುಪ್ತ ಬೆಂಗಳೂರು ನಗರ ಪೊಲೀಸ್ ಆಯುಕ್ತ ಕಮಲ್‌ಪಂತ್, ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ವಿಜಯ್‌ಕುಮಾರ್ ಗೋಗಿ ಹಾಗೂ ಇತರರು ಉಪಸ್ಥಿತರಿದ್ದರು.

## ವಸತಿ ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

ವಸತಿ ಸಚಿವ ವಿ. ಸೋಮಣ್ಣ ಅವರು ನವೆಂಬರ್ 10 ಮತ್ತು 11 ರಂದು ವಿಜಯಪುರ, ಬೆಳಗಾವಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ನವೆಂಬರ್ 11 ರಂದು ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಕರ್ನಾಟಕ ಮಾಧ್ಯಮ ಅಕಾಡೆಮಿ
# ಪತ್ರಿಕೋದ್ಯಮ ಸ್ನಾತಕೋತ್ತರ ಪದವೀಧರರಿಗೆ
# ತರಬೇತಿಗಾಗಿ ಅರ್ಜಿ ಆಹ್ವಾನ

**ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ):**

ಕರ್ನಾಟಕ ಮಾಧ್ಯಮ ಅಕಾಡೆಮಿಯ 2020-21ನೇ ಸಾಲಿನ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿಯಲ್ಲಿ (ಎಸ್.ಸಿ.ಪಿ./ ಟಿ.ಎಸ್.ಪಿ) ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ ಹಾಗೂ ವಿದ್ಯುನ್ಮಾನ ಮಾಧ್ಯಮ ಸ್ನಾತಕೋತ್ತರ ಪದವೀಧರರಿಗೆ ವೃತ್ತಿಯಲ್ಲಿ ಉತ್ತಮ ಕಾರ್ಯನಿರ್ವಹಿಸಲು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಮೂರು ತಿಂಗಳ ಅಪ್ರೆಂಟಿಸ್ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ.

ಪರಿಶಿಷ್ಟ ಜಾತಿಯ 25 ಮಂದಿ ಹಾಗೂ ಪರಿಶಿಷ್ಟ ಪಂಗಡದ 10 ಮಂದಿ ಅಭ್ಯರ್ಥಿಗಳನ್ನು ಗರಿಷ್ಠ ಅಂಕಗಳ ಆಧಾರದ ಮೇಲೆ ಹಾಗೂ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ಪತ್ರಿಕಾಲಯ / ವಾಹಿನಿಗಳಲ್ಲಿ ತರಬೇತಿ ನೀಡಿ ಮಾಹೆಯಾನ ರೂ. 15,000/- ಗಳ ಸ್ಟೈಫಂಡ್ ನೀಡಲಾಗುವುದು.

ಅಭ್ಯರ್ಥಿಯು ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದಿರಬೇಕು ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿದ್ದು ಕನ್ನಡ ಭಾಷೆಯಲ್ಲಿ ಪರಿಣಿತರಾಗಿರಬೇಕು. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ದಿನಾಂಕದಂದು ಅಭ್ಯರ್ಥಿಗಳ ವಯಸ್ಸು 40 ವರ್ಷದೊಳಗಿರಬೇಕು.

ಅರ್ಜಿಯೊಂದಿಗೆ ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಪದವಿ ಮತ್ತು ಸ್ನಾತಕೋತ್ತರ ಪದವಿ ಪ್ರಮಾಣ ಪತ್ರಗಳೊಂದಿಗೆ ಜಾತಿ ಪ್ರಮಾಣ ಪತ್ರ, ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಹಾಗೂ ಇನ್ನಿತರೆ ಪೂರಕ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಇ-ಮೇಲ್ ವಿಳಾಸ traineekma2020@gmail.com ಮೂಲಕ ಅಥವಾ ಅಂಚೆ ಮೂಲಕ ದಿನಾಂಕ : 27-11-2020 ರ ಒಳಗೆ ತಲುಪುವಂತೆ ಕಳುಹಿಸಬೇಕು.

ಈ ಹಿಂದೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಮಾಧ್ಯಮ ಅಕಾಡೆಮಿ ಸೇರಿದಂತೆ ಯಾವುದೇ ಸರ್ಕಾರಿ ಇಲಾಖೆ/ಸಂಸ್ಥೆಗಳಲ್ಲಿ ಫಲಾನುಭವಿಗಳಾಗಿದ್ದರೆ ಅಂತಹವರು ಅರ್ಜಿ ಸಲ್ಲಿಸುವಂತಿಲ್ಲ. ಸರ್ಕಾರದಿಂದ ಈಗಾಗಲೇ ಸೌಲಭ್ಯ ಪಡೆದ ಅಭ್ಯರ್ಥಿಗಳು ಸುಳ್ಳು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದಲ್ಲಿ ಅವರ ಅರ್ಜಿಯನ್ನು ತಿರಸ್ಕರಿಸಿ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮ್ಮೆ ಹೂಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 080-22860164 ಕಾರ್ಯದರ್ಶಿಗಳು, ಕರ್ನಾಟಕ ಮಾಧ್ಯಮ ಅಕಾಡೆಮಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಡಾ.ಅಂಬೇಡ್ಕರ್ ವೀಧಿ, ಬೆಂಗಳೂರು-560001 ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿ ಅಧಿಕೃತ ಪ್ರಕಟಣೆ ತಿಳಿಸಿದೆ.

## ನೂತನ ರಾಷ್ಟ್ರೀಯ ಶಿಕ್ಷಣ ನೀತಿ ವರದಿ ಸಲ್ಲಿಕೆ

ಬೆಂಗಳೂರು, ನವೆಂಬರ್ 07 (ಕರ್ನಾಟಕ ವಾರ್ತೆ) : ನೂತನ ರಾಷ್ಟ್ರೀಯ ಶಿಕ್ಷಣ ನೀತಿ-2020 ನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸುವ ಹಿನ್ನೆಲೆಯಲ್ಲಿ ರಚಿಸಲಾದ ನಿವೃತ್ತ ಮುಖ್ಯಕಾರ್ಯದರ್ಶಿ ಎಸ್.ವಿ.ರಂಗನಾಥ್ ನೇತೃತ್ವದ ತಜ್ಞರ ಸಮಿತಿಯು ಇಂದು ಉಪಮುಖ್ಯಮಂತ್ರಿ ಹಾಗೂ ಉನ್ನತ ಶಿಕ್ಷಣ ಸಚಿವ ಡಾ: ಸಿ.ಎನ್.ಅಶ್ವತ್ಥನಾರಾಯಣ ಹಾಗೂ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಅವರಿಗೆ ವಿಧಾನಸೌಧ ಸಮ್ಮೇಳನ ಸಭಾಂಗಣದಲ್ಲಿ ವರದಿಯನ್ನು ಸಲ್ಲಿಸಲಾಯಿತು.

## ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮುಖ್ಯ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿ ಪ್ರಕಟ

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು 11-10-2020 ರಂದು ನಡೆಸಿದ ಕರ್ನಾಟಕ ರಾಜ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯಲ್ಲಿನ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗ್ರೂಫ್ ಎ ವೃಂದದ ಒಟ್ಟು 24 ಹುದ್ದೆಗಳ ಪೂರ್ವಭಾವಿ ಪರೀಕ್ಷೆಯಿಂದ ಮುಖ್ಯ ಪರೀಕ್ಷೆಗೆ 1 : 10 ಅನುಪಾತದಲ್ಲಿ ಅರ್ಹ ಪಡೆದ ಅಭ್ಯರ್ಥಿಗಳ ನೋಂದಣಿ ಸಂಖ್ಯೆಗಳ ಪಟ್ಟಿ ಹಾಗೂ ಕಟ್-ಆಪ್ ಅಂಕಗಳನ್ನು ಆಯೋಗದ ವೆಬ್‌ಸೈಟ್ http://kpsc..kar.nic.in ನಲ್ಲಿ ಮಾಹಿತಿಗಾಗಿ ಪ್ರಕಟಿಸಲಾಗಿದೆ. ಮುಖ್ಯ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ದಿನಾಂಕ ಕುರಿತು ಶೀಘ್ರದಲ್ಲಿಯೇ ತಿಳಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## ಎಲ್ಲಾ ರಸಗೊಬ್ಬರ ಮಾರಾಟಗಾರರ ಗಮನಕ್ಕೆ

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

"ಕೇಂದ್ರ ಸರ್ಕಾರದಿಂದ ರಸಗೊಬ್ಬರದಲ್ಲಿ ನೇರ ನೆರವು ವರ್ಗಾವಣೆ ಯೋಜನೆಯಡಿ ಎಲ್ಲಾ ರಸಗೊಬ್ಬರ ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ರೈತರಿಗೆ ರಸಗೊಬ್ಬರವನ್ನು ಮಾರಾಟ ಮಾಡಲು ನಗದು ರಹಿತ / ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ಉತ್ತೇಜಿಸಲಾಗುತ್ತಿದೆ. ರಸಗೊಬ್ಬರ ಚಿಲ್ಲರೆ ಮಾರಾಟಗಾರರು ತಮ್ಮ ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ರಸಗೊಬ್ಬರಗಳ ಮಾರಾಟಕ್ಕಾಗಿ ಡಿಜಿಟಲ್ ಪಾವತಿಗಳನ್ನು ಸ್ವೀಕರಿಸುವ ವ್ಯವಸ್ಥೆಯನ್ನು ಮಾಡಲು ನಿರ್ದೇಶಿಸಲಾಗಿದೆ. ಆದ್ದರಿಂದ ಎಲ್ಲಾ ಚಿಲ್ಲರೆ

**ಮಾರಾಟಗಾರರು ತಮ್ಮ ಮಳಿಗೆಗಳಲ್ಲಿ ತಪ್ಪದೇ ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ಕೈಗೊಂಡು ಸಹಕರಿಸಲು ಕೃಷಿ ನಿರ್ದೇಶಕರು 080-22074143 ತಿಳಿಸಿದ್ದಾರೆ.**

**ಮುಂಬೈ ಕನ್ನಡ ಆಕಾಶವಾಣಿ ಕಾರ್ಯಕ್ರಮ ಪುನಾರಾರಂಭಿಸಲು ಸಚಿವ ರವಿ ಮನವಿ**

**ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)**

ಮುಂಬೈ ಕನ್ನಡ ಆಕಾಶವಾಣಿ ಕಾರ್ಯಕ್ರಮ ಪುನಾರಾರಂಭಿಸಲು ಸಚಿವ ರವಿ ಮನವಿ ಬೆಂಗಳೂರು-ಕಾರಣಾಂತರಗಳಿಂದ ಸ್ಥಗಿತಗೊಂಡಿರುವ ಮುಂಬೈನ ಆಕಾಶವಾಣಿಯಲ್ಲಿ ಪ್ರಸಾರವಾಗುತ್ತಿದ್ದ ಕನ್ನಡ ಕಾರ್ಯಕ್ರಮಗಳನ್ನು ತಕ್ಷಣವೇ ಪುನರಾರಂಭಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಸಿ.ಟಿ.ರವಿ ಅವರು ಮನವಿ ಮಾಡಿದ್ದಾರೆ. ಈ ಸಂಬಂಧ ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಪ್ರಕಾಶ್ ಜಾವೇಡ್ಕರ್ ಹಾಗೂ ಪ್ರಸಾರ ಭಾರತಿ ಅಧ್ಯಕ್ಷರಾದ ಡಾ.ಎ.ಸೂರ್ಯ ಪ್ರಕಾಶ್ ಅವರಿಗೆ ಪ್ರತ್ಯೇಕವಾಗಿ ಪತ್ರ ಬರೆದಿರುವ ರವಿ ಅವರು, ಕನ್ನಡಿಗರ ಒತ್ತಾಸೆಯಂತೆ ಮುಂಬೈನ ಆಕಾಶವಾಣಿಯಲ್ಲಿ ಕಾರ್ಯಕ್ರಮಗಳನ್ನು ಮರುಪ್ರಸಾರ ಮಾಡಬೇಕೆಂದು ಆಗ್ರಹಿಸಿದ್ದಾರೆ.

ಕಳೆದ ಏಳು ದಶಕಗಳಿಂದ ಮುಂಬೈ ಆಕಾಶವಾಣಿಯಲ್ಲಿ ಕನ್ನಡ ಕಾರ್ಯಕ್ರಮಗಳು ಪ್ರಸಾರವಾಗುತ್ತಿದ್ದು ಸರಿಸುಮಾರು 25 ಲಕ್ಷಕ್ಕೂ ಹೆಚ್ಚು ಮಂದಿ ಕಾರ್ಯಕ್ರಮ ಆಲಿಸುತ್ತಿದ್ದರು. ಏಕಾಏಕಿ ಕಾರ್ಯಕ್ರಮವನ್ನು ರದ್ದುಪಡಿಸಿರುವುದರಿಂದ ಹಲವರಿಗೆ ಬೇಸರ ತಂದಿದೆ ಎಂದು ಸಚಿವರ ಗಮನಕ್ಕೆ ತಂದಿದ್ದಾರೆ.

ದೇಶದ ಪ್ರತಿಯೊಂದು ಭಾಗದಲ್ಲಿ ಸ್ಥಳೀಯ ಜನತೆ ತಮ್ಮ ಭಾಷೆಯಲ್ಲಿ ಆಲಿಸಲು ಸಂವಿಧಾನವೇ ಅವಕಾಶ ಮಾಡಿಕೊಟ್ಟಿದ್ದು, ಇದರಿಂದ ರಾಷ್ಟ್ರದ ಏಕಾಗ್ರತೆಗೆ ಅನಕೂಲವಾಗಲಿದೆ ಎಂದು ಹೇಳಿದೆ. ಏಕಾಏಕಿ ಕಾರ್ಯಕ್ರಮ ಸ್ಥಗಿತವಾಗಿರುವುದರಿಂದ ಕನ್ನಡದ ಖ್ಯಾತ ಸಾಹಿತಿಗಳಾದ ಬರಗೂರ ರಾಮಚಂದ್ರಪ್ಪ ಮತ್ತಿತರರು ನನ್ನ ಗಮನಕ್ಕೆ ತಂದಿದ್ದಾರೆ. ಆಕಾಶವಾಣಿ ಕಾರ್ಯಕ್ರಮವನ್ನು

ಸ್ಥಗಿತಗೊಳಿಸಿರುವುದಕ್ಕೆ ಆಕ್ಷೇಪಿಸಿ ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಕೂಡಲೇ ಸ್ಥಗಿತವಾಗಿರುವ ಕಾರ್ಯಕ್ರಮವನ್ನು ಪುನಾರಾರಂಭಿಸಿ ಕನ್ನಡಿಗರ ಮನವಿಯನ್ನು ಸಕಾರಾತ್ಮಕವಾಗಿ ಪರಿಗಣಿಸಬೇಕೆಂದು ಮನವಿ ಮಾಡಿದ್ದಾರೆ.

ಶೀಘ್ರದಲ್ಲೇ ಕೇಂದ್ರ ಸಚಿವರಾದ ಪ್ರಕಾಶ್ ಜಾವೇಡ್ಕರ್ ಮತ್ತು ಪ್ರಸಾರ ಭಾರತಿ ಅಧ್ಯಕ್ಷರಾದ ಡಾ.ಎ.ಸೂರ್ಯಪ್ರಕಾಶ್ ಅವರನ್ನು ಭೇಟಿಯಾಗಿ ವಸ್ತುಸ್ಥಿತಿ ಮನವರಿಕೆ ಮಾಡಿ ಸ್ಥಗಿತಗೊಂಡ ಕಾರ್ಯಕ್ರಮವನ್ನು ಆರಂಭಿಸಲು ಪ್ರಯತ್ನ ಮಾಡುವ ಆಶ್ವಾಸನೆ ನೀಡಿದ್ದಾರೆ.

ಕಳೆದ ಹಲವಾರು ದಶಕಗಳಿಂದ ಮುಂಬೈನ ಆಕಾಶವಾಣಿಯಲ್ಲಿ ಪ್ರತಿದಿನ ಕನ್ನಡದ ಕಾರ್ಯಕ್ರಮಗಳು ಪ್ರಸಾರವಾಗುತ್ತಿದ್ದವು. ಅಲ್ಲದೆ ಕೆಲವು ದಿನಗಳ ಹಿಂದೆ ಏಕಾಏಕಿ ಇದನ್ನು ಸ್ಥಗಿತಗೊಳಿಸಿತ್ತು. ಇದು ಕನ್ನಡಿಗರ ಆಕ್ರೋಶಕ್ಕೆ ಗುರಿಯಾಗಿತ್ತು.

ಇದೀಗ ಸ್ವತಃ ಸಚಿವ ಸಿ.ಟಿ.ರವಿ ಅವರೇ ಪತ್ರ ಬರೆದು ಕನ್ನಡಿಗರ ಭಾವನೆಯನ್ನು ಕೇಂದ್ರ ಸಚಿವರ ಗಮನಕ್ಕೆ ತಂದಿರುವ ಹಿನ್ನೆಲೆಯಲ್ಲಿ ಮತ್ತೆ ಕಾರ್ಯಕ್ರಮ ಪುನಾರಾರಂಭವಾಗುವ ಮುನ್ಸೂಚನೆ ಸಿಕ್ಕಿದೆ. ಎಂದು ತಮ್ಮ ಪತ್ರದಲ್ಲಿ ತಿಳಿಸಿದ್ದಾರೆ.

## ಅಂತಾರಾಷ್ಟ್ರೀಯ ದತ್ತು ಮಾಸಾಚರಣೆ ನವೆಂಬರ್ –2020
## ಮಡಿಲ ಬೆಳಗು ದತ್ತು ಕಾರ್ಯಕ್ರಮ– ವಿವಿಧ ಸ್ಪರ್ಧೆಗಳು

**ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)**

**ಮಕ್ಕಳ ರಕ್ಷಣಾ ನಿರ್ದೇಶನಾಲಯವು ಕೌಟುಂಬಿಕ ವ್ಯವಸ್ಥೆಯಲ್ಲಿ ಬೆಳೆಯುವುದು ಪ್ರತಿಯೊಂದು ಮಗುವಿನ ಹಕ್ಕು ಮಗುವಿಗೆ ಅವಶ್ಯವಿರುವ ಪ್ರೀತಿ ಮತ್ತು ಆರೈಕೆಯನ್ನು ಕುಟುಂಬದ ವಾತಾವರಣವು ಕಲ್ಪಿಸುತ್ತದೆ. ಈ ನಿಟ್ಟಿನಲ್ಲಿ ದತ್ತು ಪ್ರಕ್ರಿಯೆಯು ಅನಾಥ, ಪರಿತ್ಯಕ್ತ ಮತ್ತು ಒಪ್ಪಿಸಲ್ಪಟ್ಟ ಮಕ್ಕಳ ಪುನರ್ವಸತಿಗೆ ನೆರವಾಗುವ ಮಕ್ಕಳ ರಕ್ಷಣಾ ಯೋಜನೆಯ ಸೂಕ್ತ ಕಾರ್ಯಕ್ರಮವಾಗಿದೆ. ಮಕ್ಕಳ ರಕ್ಷಣಾ ನಿರ್ದೇಶನಾಲಯದ ಅಡಿಯಲ್ಲಿ 2020 ನೇ ವರ್ಷದ ನವೆಂಬರ್ ತಿಂಗಳನ್ನು ದತ್ತು ಮಾಸಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ಇದರ ಅಂಗವಾಗಿ ದತ್ತು ವಿಷಯಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ವಿಷಯಗಳಿಗೆ**

ಸಂಬಂಧಿಸಿದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ (1) ದತ್ತು ಪಡೆದ ಮಗುವಿನ ಸುರಕ್ಷಾ ಆರೈಕೆ (2) ಮಕ್ಕಳನ್ನು ದತ್ತು ಪಡೆಯುವುದು. ಪೋಷಕರಿಗೆ ಹಾಗೂ ಮಕ್ಕಳಿಗೆ ಹೇಗೆ ಸಂತೋಷದಾಯಕವಾಗಿರುತ್ತದೆ. (3) ಪೋಷಕತ್ವ ಕುರಿತು ಪೋಸ್ಟರ್ ವಿನ್ಯಾಸ ಡ್ಯಾನ್ಸ್ (2) ನಿಮಿಷ ಮೀರಬಾರದು ಕಿರುಚಿತ್ರ (ಶಾರ್ಟ್ ಫಿಲಂ) (2) ನಿಮಿಷ ಮೀರಬಾರದು ಹಾಗೂ ಪದ್ಯ ರಚಿಸುವ ಆನ್‌ಲೈನ್ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ತಾವು ಸಿದ್ದಪಡಿಸಿದ ಪೋಸ್ಟರ್, ಕಿರುಚಿತ್ತ (ಶಾರ್ಟ್ ಫಿಲಂ) ಡ್ಯಾನ್ಸ್ ಹಾಗೂ ರಚನೆಗಳ ಪ್ರತಿಯನ್ನು **dcp.adoptionmonth2020@gmail.com** ಇ ಮೇಲ್ ವಿಳಾಸಕ್ಕೆ ದಿನಾಂಕ 21–11–2020 ಸಂಜೆ 5–30 ರ ಒಳಗಾಗಿ ಸಲ್ಲಿಸುವುದು. ಸದರಿ ಕಾರ್ಯಕ್ರಮ ಹೆಚ್ಚಿನ ಮಾಹಿತಿಗಾಗಿ **ieps.karnataka.gov.in** ವೆಬ್‌ಸೈಟ್ ನ ಇತ್ತೀಚಿನ ಸುದ್ದಿಗಳಲ್ಲಿ ವೀಕ್ಷಿಸಲು ಪ್ರಕಟಣೆ ತಿಳಿಸಿದೆ.